ಮಾಡೋಣ. ಈಗ ಆ ವಿಷಯ ಮುಕ್ತಾಯವಾಗಿದೆ. ಪ್ರಶ್ನೋತ್ತರ ಅವಧಿ ಈಗ ಮುಗಿದಿದೆ. ಈಗ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು.

ಆ) <u>ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು:</u>

ಶ್ರೀ ಎಸ್.ಸುರೇಶ್ ಕುಮಾರ್(ಕಾನೂನು ಮತ್ತು ಸಂಸದೀಯ ವ್ಯವಹಾರ, ಪೌರಾಡಳಿತ ಸಚಿವರು):– ಮಾನ್ಯ ಸಭಾಧ್ಯಕ್ಷರೆ, ಈ ದಿನ 2ನೇ ಪಟ್ಟಿಯ ಲಿಖಿತ ಮೂಲಕ ಉತ್ತರಿಸುವ 106 ಪ್ರಶ್ನೆಗಳ ಪೈಕಿ 90 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಶ್ರೀ ಹೆಚ್.ಡಿ.ರೇವಣ್ಣ:– ಮಾನ್ಯ ಅಧ್ಯಕ್ಷರೆ, ಹಾಸನ ಜಿಲ್ಲೆಗೆ ಸಂಬಂಧಪಟ್ಟಂತೆ ನನ್ನದೊಂದು ಪ್ರಶ್ನೆ ಇದೆ.

ಅಧ್ಯಕ್ಷರು:– ಆ ಪ್ರಶ್ನೆ ಮುಗಿಯಿತು. ನೀವು ಆ ಸಂದರ್ಭದಲ್ಲಿ ಬಂದಿರಲಿಲ್ಲ. ಮತ್ತೆ ನಿಮ್ಮ ಪ್ರಶ್ನೆಗೆ ಉತ್ತರ ಕೊಡುವುದಕ್ಕೆ ಮಾನ್ಯ ಸಚಿವರು ಸಮಯ ತೆಗೆದುಕೊಂಡಿದ್ದಾರೆ. ಈ ಅಧಿವೇಶನದ ಅವಧಿಯಲ್ಲಿಯೇ ಉತ್ತರ ಕೊಡಬೇಕೆಂದು ಮಾನ್ಯ ಸಚಿವರಿಗೆ ಹೇಳಿದ್ದೇನೆ.

ಶ್ರೀ ಎಸ್. ಸುರೇಶ್ ಕುಮಾರ್:– ಆರ್ಥಿಕ ಇಲಾಖೆಯಿಂದ ಮಾಹಿತಿಯನ್ನು ತರಿಸಿಕೊಂಡು ಒಂದು ವಾರದೊಳಗೆ ಉತ್ತರ ಕೊಡುತ್ತೇನೆ.

ಶ್ರೀ ಹೆಚ್.ಡಿ.ರೇವಣ್ಣ:– ಒಂದು ವಾರವೆಂದರೆ ಹೇಗೆ? ಅಷ್ಟರೊಳಗೆ ಅಧಿವೇಶನ ಮುಗಿದು ಹೋಗುತ್ತದೆ.

ಅಧ್ಯಕ್ಷರು:– ಈ ಅಧಿವೇಶನ ಮುಗಿಯುವುದರೊಳಗೆ ಉತ್ತರ ಕೊಡಬೇಕೆಂದು ಹೇಳಿದ್ದೇನೆ.

ಶ್ರೀ ಹೆಚ್.ಡಿ.ರೇವಣ್ಣ:– ಅಷ್ಟರೊಳಗೆ ಅಸೆಂಬ್ಲಿ ಮುಗಿದು ಹೋಗುತ್ತದೆ. ಬೇಕಾದರೆ, ಈ ವಿಷಯಕ್ಕೆ ಸಂಬಂಧಪಟ್ಟಂತ ಮಾಹಿತಿಯನ್ನು ನಾವು ಕೊಡುತ್ತೇವೆ.

ಅಧ್ಯಕ್ಷರು:– ಅವರೇ ಮಾಹಿತಿ ಕೊಡುತ್ತಾರಂತೆ. ಈಗ ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು.

4. <u>ಸಭೆಯ ಮುಂದಿಡಲಾದ ಕಾಗದ ಪತ್ರಗಳು</u>

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಗಳು):– ಮಾನ್ಯ ಅಧ್ಯಕ್ಷರೆ, ಭಾರತ ಸಂವಿಧಾನದ 151 (2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್ 2008ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ನಿಯಂತ್ರಕರು ಮತ್ತು ಮಹಾಲೆಕ್ಕ ಪರಿಶೋಧಕರು ನೀಡಿರುವ(ಸಿವಿಲ್) ವರದಿಯನ್ನು ಸಭೆಯ ಮುಂಡಿಸುತ್ತೇನೆ.

ಅಧ್ಯಕ್ಷರು:– ಮಂಡಿಸಲಾಯಿತು.

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಗಳು):– ಸನ್ಮಾನ್ಯ ಅಧ್ಯಕ್ಷರೆ, ಭಾರತದ ನಿಯಂತ್ರಕರು ಮತ್ತು ಮಹಾಲೆಕ್ಕ ಪರಿಶೋಧಕರು 31ನೇ ಮಾರ್ಚ್ 2008ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ವರದಿಯನ್ನು(ವಾಣಿಜ್ಯ) ಸಭೆಯ ಮಂದೆ ಮಂಡಿಸುತ್ತೇನೆ.

ಅಧ್ಯಕ್ಷರು:– ಮಂಡಿಸಲಾಯಿತು.

ಅಧ್ಯಕ್ಷರು:– ಈಗ ಗಮನ ಸೆಳೆಯುವ ಸೂಚನೆಗಳು. ಈಗ ಶ್ರೀ ಹೆಚ್.ಎಸ್.ಮಹದೇವಪ್ರಸಾದ್‌ರವರ ಗಮನ ಸೆಳೆಯುವ ಸೂಚನೆ. ಅವರು ಬಂದಿಲ್ಲ ಹಾಗಾದರೆ, ಮುಂದಿರುವ ಮಾನ್ಯ ಅಮರೇಶ್‌ರವರದು, ಅವರೂ ಕೂಡ ಬಂದಿಲ್ಲ. ಮುಂದಿನ ಗಮನ ಸೆಳೆಯುವ ಸೂಚನೆ ಮಾನ್ಯ ವೆಂಕಟರಾವ್ ನಾಡಗೌಡರವರದು.

5. ಗಮನ ಸೆಳೆಯುವ ಸೂಚನೆ

ಅ) ವಿಷಯ:– ರಾಯಚೂರು ನಗರದಲ್ಲಿರುವ ಓಪೆಕ್ ಆಸ್ಪತ್ರೆಯನ್ನು ಅಪೋಲೋ ಆಸ್ಪತ್ರೆಗೆ ಗುತ್ತಿಗೆ ನೀಡಿದ್ದು, ಸರಿಯಾಗಿ ಕೆಲಸ ನಿರ್ವಹಿಸದಿರುವುದರಿಂದ ಬಡ ರೋಗಿಗಳಿಗೆ ತೊಂದರೆಯಾಗಿರುವ ಬಗ್ಗೆ.

ಶ್ರೀ ವೆಂಕಟರಾವ್ ನಾಡಗೌಡ(ಸಿಂಧನೂರು):– ಮಾನ್ಯ ಅಧ್ಯಕ್ಷರೆ, ರಾಯಚೂರು ನಗರದಲ್ಲಿರುವ ಓಪೆಕ್ ಆಸ್ಪತ್ರೆಯನ್ನು ಅಪೋಲೊ ಆಸ್ಪತ್ರೆಗೆ ಗುತ್ತಿಗೆ ನೀಡಿದ್ದು, ಸರಿಯಾಗಿ ಕೆಲಸ ನಿರ್ವಹಿಸದಿರುವುದರಿಂದ ಬಡ ರೋಗಿಗಳಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುತ್ತೇನೆ.

ಶ್ರೀ ಬಿ.ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):– ಕರ್ನಾಟಕ ರಾಜ್ಯದ ಉತ್ತರ ಭಾಗದ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆಯನ್ನು ಒದಗಿಸಲು ಸರ್ಕಾರವು ಒಪೆಕ್ (OPEC – Organisation of Petroleum Exporting Countries) ನೆರವಿನೊಂದಿಗೆ 350 ಹಾಸಿಗೆಗಳ ಒಂದು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ರಾಯಚೂರಿನಲ್ಲಿ ಸ್ಥಾಪಿಸಿದೆ. ಈ ಆಸ್ಪತ್ರೆಯನ್ನು ನಡೆಸಲು ಸರ್ಕಾರವು ಹತ್ತು ವರ್ಷಗಳ ಅವಧಿಗೆ ಒಂದು ಸೇವಾ ಒಪ್ಪಂದವನ್ನು ಅಪೋಲೋ ಆಸ್ಪತ್ರೆಯೊಂದಿಗೆ ಮಾಡಿಕೊಂಡಿದೆ. ಸದರಿ ಸೇವಾ ಒಪ್ಪಂದವು 1ನೇ ಜುಲೈ 2001 ರಿಂದ ಜಾರಿಗೆ ಬಂದಿದೆ. ಸೇವಾ ಒಪ್ಪಂದದ ಪ್ರಕಾರ, ಆಸ್ಪತ್ರೆಯ ಸಾಮಾನ್ಯ ವಾರ್ಡ್‌ನಲ್ಲಿ ಒಟ್ಟು 140 ಹಾಸಿಗೆಗಳನ್ನು ರೋಗಿಗಳಿಗೆ ಕಡಿಮೆ ದರದಲ್ಲಿ ಚಿಕಿತ್ಸೆ ನೀಡುವ ಸಲುವಾಗಿ ಮೀಸಲಿಟ್ಟು ಆರೋಗ್ಯ ಸೇವೆಯನ್ನು ಒದಗಿಸಬೇಕು.